ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೊರರಾಜ್ಯದ ಕನ್ನಡಗರಿಗೆ ಉನ್ನತ ವ್ಯಾಸಂಗಕ್ಕಾಗಿ ಪ್ರವೇಶ ಪಡೆಯಲು ಅವಕಾಶ ಕಲ್ಪಿಸುವ ಬಗ್ಗೆ.

ಓದಲಾಗಿದೆ: 1) ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ ಇವರ ಪತ್ರ ಸಂಖ್ಯೆ ಕಂದಾಯ:ಬಿಎಡಿಎಫ್/2011-12, ದಿನಾಂಕ 22.06.2011

2) ದಿನಾಂಕ 04.07.2011 ರಂದು ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು

ಪ್ರಸ್ತಾವನೆ:

ರಾಯಚೂರು ಜಿಲ್ಲೆಯ ಗಡಿಗೆ ಹೊಂದಿಕೊಂಡಂತೆ ಆಂಧ್ರಪ್ರದೇಶ ರಾಜ್ಯದ ಮಹಬೂಬನಗರ ಜಿಲ್ಲೆಯ 13 ಗ್ರಾಮಗಳಲ್ಲಿ ಕನ್ನಡ ಶಾಲೆಗಳಿಗೆ ಅಗತ್ಯ ಕನ್ನಡ ಮಾಧ್ಯಮದ ಪಠ್ಯಪುಸ್ತಕಗಳು ಲಭ್ಯವಿಲ್ಲದ ಪ್ರಯುಕ್ತ ಗಡಿ ಪ್ರದೇಶ ವಿದ್ಯಾರ್ಥಿಗಳು ಕನ್ನಡ ಮಾಧ್ಯಮ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆಂದು ಮತ್ತು ಕನ್ನಡ ಶಾಲೆಗಳಿಗೆ ಬೀಗ ಹಾಕಲಾಗುತ್ತಿದೆ ಎಂದು ಸುದ್ದಿಗಳು ಪ್ರಕಟವಾಗಿರುವ ಹಿನ್ನೆಲೆಯಲ್ಲಿ ಸದರಿ 13 ಗ್ರಾಮಗಳನ್ನು ಕರ್ನಾಟಕ ಸರ್ಕಾರದ ವತಿಯಿಂದ ಗಡಿಪ್ರದೇಶ ಹೊರನಾಡು ಕನ್ನಡ ಗ್ರಾಮಗಳೆಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಅಧಿಸೂಚನೆಯನ್ನು ಪ್ರಕಟಿಸುವ ಅವಶ್ಯಕತೆ ಇರುತ್ತದೆ. ಇದರಿಂದ ಹೊರನಾಡು ಕನ್ನಡಿಗರಿಗೆ ಉನ್ನತ ಶೈಕ್ಷಣಿಕ ವ್ಯಾಸಂಗ, ತಾಂತ್ರಿಕ ಶಿಕ್ಷಣಕ್ಕಾಗಿ ಪ್ರವೇಶ ಪಡೆಯಲು ಮತ್ತು ಇತರೆ ಸಂಬಂಧಿತ ಸೌಲಭ್ಯ ಪಡೆಯಲು ಅನುಕೂಲವಾಗುತ್ತದೆಂದು, ಈ ಕುರಿತು ಕ್ರಮವಹಿಸುವಂತೆ ಮೇಲೆ (1) ರಲ್ಲಿ ಓದಲಾದ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ರಾಯಚೂರು ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾಪಿತ ಕೋರಿಕೆಯ ಬಗ್ಗೆ ದಿನಾಂಕ 04.07.2011 ರಂದು ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಅಧ್ಯಕ್ಷತೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ, ಸಮಾಜ ಕಲ್ಯಾಣ ಇಲಾಖೆ, ಕಾನೂನು ಇಲಾಖೆ ಹಾಗೂ ಇನ್ನಿತರ ಸಂಬಂಧಪಟ್ಟ ಇಲಾಖೆಗಳ ಪ್ರತಿನಿಧಿಗಳ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಸಮಗ್ರವಾಗಿ ಪರಿಶೀಲಿಸಿ, ಭಾರತ ದೇಶದ ಯಾವುದೇ ಭಾಗದಲ್ಲಿ 1ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ಓದಿದ ಅಭ್ಯರ್ಥಿಗಳಿಗೆ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ, ಡಿಪ್ಲೋಮಾ ಕೋರ್ಸ್‌ಗಳ ಕಾಲೇಜುಗಳಲ್ಲಿ, ತಾಂತ್ರಿಕ ಸಂಸ್ಥೆಗಳಲ್ಲಿ, ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕಾಗಿ ಪ್ರವೇಶ ಪಡೆಯಲು ಅವಕಾಶ ಕಲ್ಪಿಸುವಂತೆ ಆದೇಶ ಹೊರಡಿಸಲು ಸದರಿ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಅದರಂತೆ ಈ ಕೆಳಕಂಡ ಆದೇಶ

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 73 ಕೆಒಎಲ್ 2011(ಭಾ-1)
ಬೆಂಗಳೂರು, ದಿನಾಂಕ: 13.07.2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಭಾರತ ದೇಶದ ಯಾವುದೇ ಭಾಗದಲ್ಲಿ 1ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ಓದಿದ ಅಭ್ಯರ್ಥಿಗಳಿಗೆ ಪದವಿ ಪೂರ್ವ ಕಾಲೇಜುಗಳಲ್ಲಿ, ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ, ಡಿಪ್ಲೋಮಾ ಕೋರ್ಸ್‌ಗಳ ಕಾಲೇಜುಗಳಲ್ಲಿ, ತಾಂತ್ರಿಕ ಸಂಸ್ಥೆಗಳಲ್ಲಿ, ವಿಶ್ವವಿದ್ಯಾಲಯಗಳಲ್ಲಿ

ಉನ್ನತ ವ್ಯಾಸಂಗಕ್ಕಾಗಿ ಹಾಗೂ ಇನ್ನಿತರ ವೃತ್ತಿಪರ ಕೋರ್ಸ್‌ಗಳಿಗೆ ಗಡಿನಾಡು/ಹೊರನಾಡು ಕನ್ನಡಿಗರ ಮೀಸಲಾತಿ ಅಡಿಯಲ್ಲಿ ಪ್ರವೇಶ ಪಡೆಯಲು ಅವಕಾಶ ಕಲ್ಪಿಸಿ, ಆದೇಶಿಸಿದೆ.

ಈ ಅಂಶದ ಬಗ್ಗೆ ಸಂಬಂಧಿತ ಇಲಾಖೆಗಳು ಸಂಬಂಧಪಟ್ಟ ನಿಯಮಗಳಿಗೆ ಸೂಕ್ತ ತಿದ್ದುಪಡಿ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎನ್. ಗೀತಾಕುಮಾರಿ
(ಎನ್.ಗೀತಾಕುಮಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಇವರಿಗೆ: ಸಂಕಲನಾಧಿಕಾರಿ, ಕರ್ನಾಟಕ ರಾಜ್ಯಪತ್ರ, ಕಂಗೇರಿ ಮುದ್ರಣಾಲಯ, ಬೆಂಗಳೂರು – ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ ಅದರ 50 ಪ್ರತಿಗಳನ್ನು ಈ ಇಲಾಖೆಗೆ ಕಳುಹಿಸುವಂತೆ ಕೋರಿದೆ.

ಪ್ರತಿಯನ್ನು:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ
3) ಎಲ್ಲಾ ಜಿಲ್ಲಾಧಿಕಾರಿಗಳಿಗೆ
4) ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳಿಗೆ
5) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
6) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ, ಬೆಂಗಳೂರು
7) ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ತರಬೇತಿ ನಿರ್ದೇಶನಾಲಯ, ಡೈರಿ ಸರ್ಕಲ್, ಬೆಂಗಳೂರು
8) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು
9) ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ, ಬೆಂಗಳೂರು
10) ಆಯುಕ್ತರು, ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು
11) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
12) ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು
13) ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು
14) ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ. – 10 ಪ್ರತಿಗಳೊಂದಿಗೆ
15) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
16) ಸರ್ಕಾರದ ಉಪಕಾರ್ಯದರ್ಶಿ ಅವರ ಆಪ್ತಶಾಖೆ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
17) ಸಮನ್ವಯ ಶಾಖೆ/ ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು